1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ

Spl.C.31/2015

ದಿಃ 05.03.2020

(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-3 Pw-3

ಹೆಸರು : ಎನ್ ದೇವರಾಜು
ತಂದೆಯ ಹೆಸರು : ನರಸಿಂಹಯ್ಯ
ವಯಸ್ಸು : 39 ವರ್ಷ
ಉದ್ಯೋಗ : ವ್ಯವಸಾಯ
ವಾಸಸ್ಥಳ : ಕೆಂಪಸಾಗರ

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.1 ನನಗೆ ಗೊತ್ತಿಲ್ಲ. ಅವರ ಪ್ರಕರಣದ ಸಂಬಂಧ ಪೊಲೀಸರು ನನ್ನನ್ನು ಎಲ್ಲಿಗೂ ಕರೆದು ನನ್ನ ಸಮಕ್ಷಮ ಯಾವುದೇ ನಡವಳಿಕೆ ಮಾಡಿಲ್ಲ. ಸಾಕ್ಷಿದಾರರು ಮಹಜರ್ ಮತ್ತು ಅದರಲ್ಲಿರುವ ತಮ್ಮ ಸಹಿಯನ್ನು ಗುರುತಿಸಿದ್ದು, ಅವುಗಳನ್ನು ನಿ.ಪಿ.7 ಮತ್ತು 7(ಎ) ಎಂದು ಗುರುತಿಸಲಾಯಿತು. ಈ ಸಹಿಯನ್ನು ಸುಮಾರು 4-5 ವರ್ಷಗಳ ಹಿಂದೆ ಪೊಲೀಸರು ಪಡೆದಿದ್ದು, ಯಾವ ಕಾರಣಕ್ಕೆಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ವಿಶೇಷ ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

ದಿಃ12.08.2014 ರಂದು ಬೆಳಿಗ್ಗೆ 9.00 ರಿಂದ 9.30 ಗಂಟೆ ಸಮಯದಲ್ಲಿ ನನ್ನ ಮತ್ತು ಚಾಸಾ.2 ರವರ ಸಮಕ್ಷಮ, ಚಾಸಾ.1 ರವರು ತೋರಿಸಿದ ಸ್ಥಳವನ್ನು ಪೊಲೀಸರು ಪರಿಶೀಲಿಸಿ, ನಿ.ಪಿ.7 ಮಹಜರ್ ಕ್ರಮ ಜರುಗಿಸಿ, ಸ್ಥಳದಲ್ಲಿಯೇ ನಮ್ಮ ಸಹಿ ಪಡೆದರು ಎಂದು ಸೂಚಿಸುವುದು ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

ಪಾಟೀ ಸವಾಲುಃ ಶ್ರೀ. ಕೆ.ಟಿ.ವಿ., ಪಿ.ಎಸ್.ಹೆಚ್., ಕೆ.ಸಿ.ಎಂ., ಟಿ.ಜಿ., ಬಿ.ಹೆಚ್.ಹೆಚ್., ವಕೀಲರಿಂದ ಆರೋಪಿಗಳ ಪರವಾಗಿಃ ಇಲ್ಲವೆಂದಿದ್ದಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಮರುಳಸಿದ್ಧಾರಾಧ್ಯ ಹೆಚ್.ಜೆ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.